3. ಶ್ರೀ ಹೆಚ್. ವಿಶ್ವನಾಥ್ (ಅರಣ್ಯ ಮಂತ್ರಿ) ಅವರು: -

1956ನೇ ಸಾಲಿನ ಕಂಪನಿಗಳ ಕಾಯ್ದೆಯ 619 (ಎ) ಕಲಮಿನ ಮೇರೆಗೆ :-

1992-93ನೇ ಸಾಲಿನ ಕರ್ನಾಟಕ ಗೇರು ಅಭಿವೃದ್ಧಿ ನಿಗಮ ನಿಯಮಿತದ 15ನೇ ವಾರ್ಷಿಕ ವರದಿಯನ್ನು ಮಂಡಿಸುತ್ತೇನೆ.

ಅಧ್ಯಕ್ಷರು :- ಮಂಡಿಸಲಾಯಿತು.

ಕಾರ್ಯದರ್ಶಿಗಳ ವರದಿ

ಕಾರ್ಯದರ್ಶಿಗಳು :- ಮಾನ್ಯ ಅಧ್ಯಕ್ಷರೇ, ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ಈ ಕೆಳಕಂಡ ವಿಧೇಯಕಗಳನ್ನು ಸಭೆಯ ಮುಂದೆ ಇಡುತ್ತೇನೆ.

1) ಕರ್ನಾಟಕ ಬಾಡಿಗೆ ನಿಯಂತ್ರಣ ತಿದ್ದುಪಡಿ ವಿದೇಯಕ1 994 ಅನುಬಂಧ-I

2) ಕರ್ನಾಟಕ ಭೂ ಕಂದಾಯ ತಿದ್ದುಪಡಿ ವಿಧೇಯಕ 1994. ಅನುಬಂಧ-II

ಅಧ್ಯಕ್ಷರು :- ಮಂಡಿಸಲಾಯಿತು

ವಿತ್ತೀಯ ಕಾರ್ಯಕಲಾಪಗಳು

ಅಧ್ಯಕ್ಷರು :- ಈಗ 1994 - 95ನೇ ಸಾಲಿನ ಪೂರಕ ಅಂದಾಜುಗಳ ಮೊದಲನೇ ಕಂತಿನ ಮೇಲಿನ ಚರ್ಚೆ ಹಾಗೂ ಮತಕ್ಕೆ ಹಾಕುವುದು.

ಅಧ್ಯಕ್ಷರು :- ಈಗ 1994-95ನೇ ಸಾಲಿನ ಪೂರಕ ಅಂದಾಜುಗಳ ಮೊದಲನೇ ಕಂತಿನ ಮೇಲಿನ ಚರ್ಚೆ ಹಾಗೂ ಮತಕ್ಕೆ ಹಾಕುವುದು.

ಶ್ರೀ ಆರ್.ವಿ.ದೇಶಪಾಂಡೆ :- ಮಾನ್ಯ ಅಧ್ಯಕ್ಷರೇ, ಮುಖ್ಯಮಂತ್ರಿಗಳು ಎಲ್ಲಿದ್ದಾರೆ? ನಾವು ರೈಸ್ ಮಾಡಿದ ಪ್ರಶ್ನೆಗಳಿಗೆ ಉತ್ತರ ಕೊಡಲು ಉಪ ಮುಖ್ಯಮಂತ್ರಿಗಳು ಬರಬೇಕು, ಅವರು ಬರಬೇಕು ಇವರು ಬರಬೇಕು ಎಂದು ಹೇಳುತ್ತಾರೆ. ಮಾನ್ಯ ಮುಖ್ಯಮಂತ್ರಿಗಳು ಬರಲಿ. ಅಲ್ಲಿಯವರೆಗೂ ನಾವು ಭಾಗವಹಿಸುವುದಿಲ್ಲ ನಾವು ಏತಕ್ಕೆ ನಿಮಗೆ ಸಹಕಾರ ಕೊಡಬೇಕು?

ಶ್ರೀ ಹಾರ್ನಹಳ್ಳಿ ರಾಮಸ್ವಾಮಿ :- ಮಾನ್ಯ ಅಧ್ಯಕ್ಷರೇ, ಇಂದು ಎರಡು ಸಭೆಗಳನ್ನು ಒಂದೇ ಸಮಯಕ್ಕೆ ಕರೆಯಲಾಗಿದೆ ಮೇಲ್ಮನೆಯಲ್ಲಿ ಮಾನ್ಯ ಮುಖ್ಯಮಂತ್ರಿಗಳದ್ದೇ ಕಾರ್ಯಕಲಾಪಗಳು ಇವೆ. ಆದ್ದರಿಂದ ಈಗ ಕಾಗೋಡು ತಿಮ್ಮಪ್ಪನವರು ತಮ್ಮ ವಿಧೇಯಕವನ್ನು ಮಂಡಿಸುತ್ತಾರೆ. ಅದರ ಮೇಲೆ ತಾವು ಮಾತನಾಡಬಹುದು.

ಶ್ರೀ ವಾಟಾಳ್ ನಾಗರಾಜ್ :- ಸ್ವಾಮಿ ಕೆಲವು ಹೇಳಿಕೆಗಳನ್ನು ಸರ್ಕಾರ ಕೊಡಬೇಕಾಗಿದೆ.